# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 414(509) |
| ಸದಸ್ಯರ ಹೆಸರು | : | **ಡಾ. ತಳವಾರ್ ಸಾಬಣ್ಣ** |
| ಉತ್ತರಿಸುವ ದಿನಾಂಕ | : | 08.12.2023 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲ್ಯಾಣ ಕರ್ನಾಟಕ ಭಾಗದ ವಿಶ್ವವಿದ್ಯಾಲಯಗಳು ಕೆ.ಕೆ.ಆರ್.ಡಿ.ಬಿ (KKRDB) ಅನುದಾನಕ್ಕೆ ಒಳಪಡುತ್ತದೆಯೇ;</td><td>ಕಲ್ಯಾಣ ಕರ್ನಾಟಕ ಭಾಗದ ವಿಶ್ವವಿದ್ಯಾಲಯಗಳು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB) ಅನುದಾನಕ್ಕೆ ಒಳಪಡುವುದಿಲ್ಲ. ಆದರೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬರುವ ವಿಶ್ವವಿದ್ಯಾಲಯಗಳ ಅಭಿವೃದ್ಧಿ ಕಾರ್ಯಗಳಿಗೆ ಮಂಡಳಿಯಿಂದ ಅನುದಾನ ನೀಡಲಾಗುತ್ತಿದೆ.</td></tr>
<tr><td>ಆ)</td><td>ಐದು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬರುವ ವಿಶ್ವವಿದ್ಯಾಲಯಗಳ ಅಭಿವೃದ್ಧಿ ಕಾರ್ಯಗಳಿಗೆ ಎಷ್ಟು ಹಣ ಒದಗಿಸಲಾಗಿದೆ; (ವಿವರ ನೀಡುವುದು)</td><td>ಐದು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬರುವ ವಿಶ್ವವಿದ್ಯಾಲಯಗಳ ಅಭಿವೃದ್ಧಿ ಕಾರ್ಯಗಳಿಗೆ ರೂ.14486.910 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. ವಿವರ ಈ ಕೆಳಗಿನಂತಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ನಿಗಧಿಪಡಿಸಿದ ಅನುದಾನ (ರೂ ಲಕ್ಷಗಳಲ್ಲಿ)</th></tr>
<tr><td>1</td><td>2018-19</td><td>1078.090</td></tr>
<tr><td>2</td><td>2019-20</td><td>1319.000</td></tr>
<tr><td>3</td><td>2020-21</td><td>364.480</td></tr>
<tr><td>4</td><td>2021-22</td><td>3045.950</td></tr>
<tr><td>5</td><td>2022-23</td><td>8679.390</td></tr>
<tr><td></td><td>ಒಟ್ಟು</td><td>14486.910</td></tr>
</table></td></tr>
<tr><td>ಇ)</td><td>ಈ ಭಾಗದ ವಿಶ್ವವಿದ್ಯಾಲಯಗಳ ಅಭಿವೃದ್ಧಿ ಕಾರ್ಯಗಳಿಗೆ ಕೆ.ಕೆ.ಆರ್.ಡಿ.ಬಿ ಶೇಕಡ 10ರಷ್ಟು ಹಣ ಕಾಯ್ದಿರಿಸಬೇಕೆಂದು ನಿರ್ದೇಶನ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>-ಹೌದು-</td></tr>
<tr><td>ಈ)</td><td>ಬಂದಿದ್ದಲ್ಲಿ, 2023-24ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ವಿಶ್ವವಿದ್ಯಾಲಯಗಳಿಗೆ ಎಷ್ಟು ಹಣವನ್ನು ಕಾಯ್ದಿರಿಸಲಾಗಿದೆ?</td><td>ಮಾನ್ಯ ಘನವೆತ್ತ ರಾಜ್ಯಪಾಲರು ಮುಂಬರುವ 2024-25ನೇ ಸಾಲಿನಿಂದ ಕಲ್ಯಾಣ ಕರ್ನಾಟಕ ಭಾಗದ ವಿಶ್ವವಿದ್ಯಾಲಯಗಳಿಗೆ ಶೇ.10ರಷ್ಟು ಅನುದಾನವನ್ನು ಮೀಸಲಿಡಲು ಸೂಚಿಸಿರುವುದರಿಂದ ಪ್ರಸಕ್ತ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ವಿಶ್ವವಿದ್ಯಾಲಯಗಳಿಗೆ ಅನುದಾನ ಕಾಯ್ದಿರಿಸಿರುವುದಿಲ್ಲ.</td></tr>
</table>

ಸಂಖ್ಯೆ: ಪಿಡಿಎಸ್ 209 ಹೆಚ್ ಕೆಡಿ 2023

**(ಡಿ.ಸುಧಾಕರ್)**
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ ಸಚಿವರು.